ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿಗೆ ಕೊಳವೆ ಬಾವಿಗಳನ್ನು ಕೊರೆಯಿಸಿ ಪಂಪ್ ಅಳವಡಿಸುವ ಬಗ್ಗೆ

ಶ್ರೀ ಹೆಚ್. ಎಂ. ರೇವಣ್ಣ(ವಿಧಾನ ಸಭೆಯಿಂದ ಚುನಾಯಿತರಾದವರು):-

1368 (1615) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುತ್ತಿರುವುದರಿಂದ ಕೊಳವೆ ಬಾವಿಗಳನ್ನು ಕೊರೆದು ಪಂಪ್ ಮೋಟಾರ್ ಅಳವಡಿಸಿ ವಿದ್ಯುದ್ದೀಕರಣಗೊಳಿಸಲು ಪ್ರತಿ ಘಟಕಕ್ಕೆ ನಿಗಧಿಪಡಿಸಿರುವ ಅನುದಾನ ಎಷ್ಟು;

(ಆ) ಸರ್ಕಾರ 2018-19ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿಗಳಿಗೆ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಬಿಡುಗಡೆ ಮಾಡಲಾದ ಅನುದಾನ ಅತ್ಯಲ್ಪವಾಗಿರುವುದರಿಂದ ಕೊರೆದ ಕೊಳವೆ ಬಾವಿಗಳಿಗೆ ಪಂಪ್ ಮೋಟಾರ್ ಹಾಗೂ ವಿದ್ಯುದ್ದೀಕರಣ ಕಾಮಗಾರಿಗಳನ್ನು ಕೈಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು 2019-20ನೇ ಸಾಲಿನಲ್ಲಿ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಲಾಗುವುದೇ;

(ಈ) ಗ್ರಾಮ ಪಂಚಾಯಿತಿಗಳಲ್ಲಿ ಸೋಲಾರ್ ದೀಪಗಳನ್ನು ಅಳವಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಉ) ಹಾಗಿದ್ದಲ್ಲಿ, ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಸೋಲಾರ್ ದೀಪಗಳನ್ನು ಅಳವಡಿಸಲು ನಿಗಧಿಪಡಿಸಿರುವ ಅನುದಾನ ಎಷ್ಟು?